ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE: 29/11/20

# ಅಧಿವೇಶನದಲ್ಲಿ 10 ಮಸೂದೆ ಮಂಡನೆ

## 'ಒಂದು ದೇಶ, ಒಂದು ಚುನಾವಣೆ' ಬಗ್ಗೆಯೂ ಚರ್ಚೆ | ಡಿ.7ರಿಂದ 15ರವರೆಗೆ ವಿಧಾನ ಕಲಾಪ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿರುವ 'ಒಂದು ದೇಶ, ಒಂದು ಚುನಾವಣೆ'ಗೆ ದನಿಗೂಡಿಸಿರುವ



ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಮುಂದಿನ ತಿಂಗಳು 7ರಿಂದ ಆರಂಭವಾಗುವ ವಿಧಾನಮಂಡಲ ಅಧಿವೇಶನದಲ್ಲಿ ಎರಡು ದಿನಗಳ ಕಾಲ 'ಒಂದು ದೇಶ, ಒಂದು ಚುನಾವಣೆ' ವಿಷಯದ ಮೇಲೆ ಚರ್ಚೆಗೆ ಮೀಸಲಿಟ್ಟಿದ್ದಾರೆ.

ವಿಧಾನಮಂಡಲ ಅಧಿವೇಶನವು ಡಿ.7ರಿಂದ ಡಿ.15ರವರೆಗೆ ನಡೆಯಲಿದೆ. ನಾಲ್ಕು ಸುಗ್ರೀವಾಜ್ಞೆಗಳು ಸೇರಿದಂತೆ 10 ವಿಧೇಯಕಗಳು ಮಂಡನೆಯಾಗಲಿವೆ. ಡಿ.14 ಮತ್ತು 15ರಂದು ಎರಡು ದಿನಗಳ ಕಾಲ 'ಒಂದು ದೇಶ, ಒಂದು ಚುನಾವಣೆ' ಕುರಿತು ಚರ್ಚೆಗೆ ನಿಗದಿ ಮಾಡಲಾಗಿದೆ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನ.25 ಮತ್ತು 26ರಂದು ಗುಜರಾತಿನ ಕೇವಡಿಯಾದಲ್ಲಿ ನಡೆದ ಎರಡು ದಿನಗಳ ಸಭಾಧ್ಯಕ್ಷರ ಸಮ್ಮೇಳನದಲ್ಲಿ ಹಲವು ಉಪಯುಕ್ತ ವಿಚಾರಗಳು ವ್ಯಕ್ತವಾದವು. ಈ ವೇಳೆ ಒಂದು ದೇಶ, ಒಂದು ಚುನಾವಣೆಗೆ ಆದ್ಯತೆ ನೀಡಬೇಕು ಎಂದು ಎಲ್ಲಾ ರಾಜ್ಯಗಳ ಸಭಾಧ್ಯಕ್ಷರಿಗೆ ತಿಳಿಸಿದರು. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಜತೆ ಚರ್ಚೆ ನಡೆಸಲಾಗಿದೆ ಎಂದು ಮಾಹಿತಿ ನೀಡಿದರು.

### ಶಾಸಕರಿಗೆ ಕೋವಿಡ್ ಟೆಸ್ಟ್ ಬಗ್ಗೆ ಇನ್ನೂ ತೀರ್ಮಾನವಿಲ್ಲ

ಬೆಂಗಳೂರು: ಈ ಹಿಂದಿನಂತೆ ವಿಧಾನಸಭಾ ಅಧಿವೇಶನಕ್ಕೆ ಬರುವವರು ಕೋವಿಡ್ ಪರೀಕ್ಷೆ ಕಡ್ಡಾಯವಾಗಿ ಮಾಡಿಸಿಕೊಳ್ಳಬೇಕೇ ಎಂಬುದರ ಬಗ್ಗೆ ಯಾವುದೇ ತೀರ್ಮಾನ ಕೈಗೊಂಡಿಲ್ಲ ಎಂದು ಕಾಗೇರಿ ತಿಳಿಸಿದರು. ಆರೋಗ್ಯ ಇಲಾಖೆಯ ಅಧಿಕಾರಿಗಳ ಜತೆ ಚರ್ಚೆ ನಡೆಸಿದ ಬಳಿಕ ಕೋವಿಡ್ ಪರೀಕ್ಷೆ ಬಗ್ಗೆ ನಿರ್ಣಯ ಕೈಗೊಳ್ಳಲಾಗುವುದು ಎಂದರು.